# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 708

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 12-07-2023

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿ ಮಹಿಳೆಯರಿಗೆ ಬಸ್ಸಿನಲ್ಲಿ ಉಚಿತ ಪ್ರಯಾಣ ಶಕ್ತಿ ಯೋಜನೆ ಜಾರಿಗೆ ತರುವ ಮೊದಲು ದಿನಂಪ್ರತಿ ಎಷ್ಟು ಪ್ರಯಾಣಿಕರು ಪ್ರಯಾಣಿಸುತ್ತಿದ್ದರು ಹಾಗೂ ಈ ಯೋಜನೆಯ ನಂತರ ಎಷ್ಟು ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ;</td><td>ಶಕ್ತಿ ಯೋಜನೆ ಜಾರಿಗೆ ತರುವ ಮೊದಲು ಸಾರಿಗೆ ನಿಗಮಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಸಂಚರಿಸುತ್ತಿದ್ದ ಸರಾಸರಿ ಪ್ರಯಾಣಿಕರ ಸಂಖ್ಯೆಯ ಮಾಹಿತಿ ಈ ಕೆಳಕಂಡಂತಿದೆ:<br><br>
<table>
<tr><th>ಸಂಸ್ಥೆ</th><th>ಪ್ರಯಾಣಿಕರ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>26.25 ಲಕ್ಷ</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>27.34 ಲಕ್ಷ</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>16.49 ಲಕ್ಷ</td></tr>
<tr><td>ಕ.ಕ.ರ.ಸಾ.ನಿಗಮ</td><td>13.50 ಲಕ್ಷ</td></tr>
</table>
<br>ಶಕ್ತಿ ಯೋಜನೆ ಜಾರಿ ನಂತರ ಬಸ್‌ಗಳಲ್ಲಿ ಸಂಚರಿಸುವ ಸರಾಸರಿ ಪ್ರಯಾಣಿಕರ ಸಂಖ್ಯೆಯ ಮಾಹಿತಿ ಈ ಕೆಳಕಂಡಂತಿದೆ:<br><br>
<table>
<tr><th>ಸಂಸ್ಥೆ</th><th>ಸರಾಸರಿ ಪ್ರಯಾಣಿಕರ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>29.65 ಲಕ್ಷ</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>38.52 ಲಕ್ಷ</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>23.68 ಲಕ್ಷ</td></tr>
<tr><td>ಕ.ಕ.ರ.ಸಾ.ನಿಗಮ</td><td>15.57 ಲಕ್ಷ</td></tr>
</table>
</td></tr>
<tr><td>ಆ.</td><td>ಪ್ರಯಾಣ ಮಾಡುವ ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಹೆಚ್ಚು ಬಸ್ಸುಗಳನ್ನು ಒದಗಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಹೆಚ್ಚುವರಿ ಬಸ್ಸುಗಳನ್ನು ಸರ್ಕಾರ ವ್ಯವಸ್ಥೆ ಮಾಡಿದೆ;</td><td>2023-24ನೇ ಸಾಲಿನ ಕ್ರಿಯಾ ಯೋಜನೆಯಂತೆ ಹಾಗೂ ಶಕ್ತಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಹೊಸ ವಾಹನಗಳನ್ನು ಸೇರಿಸುವ ಅವಶ್ಯವಿದ್ದು, ಈ ಬಗ್ಗೆ ಯೋಜನೆ ರೂಪಿಸಲಾಗುತ್ತಿದೆ.<br><br>ಕ.ರಾ.ರ.ಸಾ.ನಿಗಮ:<br><br>ಶಕ್ತಿ ಯೋಜನೆ ಜಾರಿಗೂ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿ ನಂತರದಲ್ಲಿ 45678 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 423 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.</td></tr>
</table>

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>ಬೆಂ.ಮ.ಸಾ.ಸಂಸ್ಥೆ:<br><br>ಶಕ್ತಿ ಯೋಜನೆ ಜಾರಿಗೂ ಮೊದಲು 51873 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿ ನಂತರದಲ್ಲಿ 52861 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 988 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ವಾ.ಕ.ರ.ಸಾ.ಸಂಸ್ಥೆ:<br><br>ಶಕ್ತಿ ಯೋಜನೆ ಜಾರಿಗೂ ಮೊದಲು 34054 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿ ನಂತರದಲ್ಲಿ 34940 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 886 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಕ.ಕ.ರ.ಸಾ.ನಿಗಮ:<br><br>ಶಕ್ತಿ ಯೋಜನೆ ಜಾರಿಗೂ ಮೊದಲು 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಸದರಿ ಯೋಜನೆ ಜಾರಿಯಾದ ನಂತರ 24184 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 1970 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.</td></tr>
<tr><td>ಇ.</td><td>ವ್ಯವಸ್ಥೆ ಮಾಡಿದ್ದರೂ ರಾಜ್ಯದ ಹಲವಾರು ಕಡೆಗಳಲ್ಲಿ ಬಸ್ಸುಗಳೇ ಇಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>ಮುಂದುವರೆದು, ರಸ್ತೆ ಸೌಲಭ್ಯವಿರುವ ಗ್ರಾಮಗಳ ಸಮೀಪದವರೆಗೆ ನಿಗಮಗಳಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.</td></tr>
<tr><td>ಈ.</td><td>ಕಳೆದ 5 ವರ್ಷದಲ್ಲಿ ಸಾರಿಗೆ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿ ಸಂಖ್ಯೆಯೆಷ್ಟು; ಪ್ರಸ್ತುತ ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ; (ಪೂರ್ಣ ವಿವರ ನೀಡುವುದು)</td><td>ಸಾರಿಗೆ ಇಲಾಖೆ/ ಸಂಸ್ಥೆಗಳಲ್ಲಿ ಕಳೆದ 05 ವರ್ಷದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿ ಸಂಖ್ಯೆಯ ಮಾಹಿತಿ ಈ ಕೆಳಕಂಡಂತಿದೆ:
<table>
<tr><th>ವರ್ಷ</th><th>ಸಾರಿಗೆ ಮತ್ತು ರಸ್ತೆ ಸುರಕ್ಷತೆ</th><th>ಕ.ರಾ.ರ.ಸಾ. ನಿಗಮ</th><th>ಬೆಂ.ಮ.ಸಾ. ಸಂಸ್ಥೆ</th><th>ವಾ.ಕ.ರ.ಸಾ. ಸಂಸ್ಥೆ</th><th>ಕ.ಕ.ರ.ಸಾ. ನಿಗಮ</th></tr>
<tr><td>ಮಾರ್ಚ್-2019ರ ಅಂತ್ಯಕ್ಕೆ</td><td>1439</td><td>38601</td><td>33878</td><td>23665</td><td>20,574</td></tr>
</table></td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ | | | | | |
|---|---|---|---|---|---|---|---|
| | | ಮಾರ್ಚ್-2020 ರ ಅಂತ್ಯಕ್ಕೆ | 1383 | 38368 | 33292 | 23174 | 20,376 |
| | | ಮಾರ್ಚ್-2021 ರ ಅಂತ್ಯಕ್ಕೆ | 1296 | 37202 | 32308 | 22351 | 19,629 |
| | | ಮಾರ್ಚ್-2022 ರ ಅಂತ್ಯಕ್ಕೆ | 1258 | 35672 | 30153 | 22174 | 19,319 |
| | | ಮಾರ್ಚ್-2023ರ ಅಂತ್ಯಕ್ಕೆ | 1263 | 34741 | 29457 | 21449 | 18803 |
| | | ಪ್ರಸ್ತುತ ಮೇ-2023ರ ಅಂತ್ಯಕ್ಕೆ | 1248 | 34480 | 29325 | 21244 | 18606 |
| ಉ. | ಸಾರಿಗೆ ಸಂಸ್ಥೆಯ ನೌಕರರಿಗೆ ವೇತನ ಹೆಚ್ಚಳ ಮಾಡಿ ಎಷ್ಟು ವರ್ಷಗಳಾಗಿವೆ; ವೇತನ ಹೆಚ್ಚಳಕ್ಕೆ ಸಾರಿಗೆ ಇಲಾಖೆಯಲ್ಲಿರುವ ಮಾನದಂಡವೇನು? | ಸಾರಿಗೆ ಸಂಸ್ಥೆಗಳ ಅಧಿಕಾರಿ/ಸಿಬ್ಬಂದಿಗಳು ದಿನಾಂಕ:31.12.2019ರಂದು ಪಡೆಯುತ್ತಿದ್ದ ಮೂಲ ವೇತನಕ್ಕೆ ಶೇ.15ರಷ್ಟು ಹೆಚ್ಚಳ ಮಾಡಿ ದಿನಾಂಕ: 01.03.2023ರಿಂದ ಜಾರಿಗೆ ಬರುವಂತೆ ವೇತನ ಪರಿಷ್ಕರಿಸಲಾಗಿದೆ.<br><br>ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರ ವೇತನವನ್ನು ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಪರಿಷ್ಕರಿಸುವ ಪದ್ಧತಿ ಜಾರಿಯಲ್ಲಿದ್ದು, ನಿಗಮಗಳ ಆರ್ಥಿಕ ಸಾಮರ್ಥ್ಯವನ್ನು ಗಣನೆಗೆ ತೆಗೆದುಕೊಂಡು ವೇತನ ಪರಿಷ್ಕರಣೆಯನ್ನು ಮಾಡುವ ಪದ್ಧತಿ ಜಾರಿಯಲ್ಲಿರುತ್ತದೆ. | | | | | |

ಸಂಖ್ಯೆ: ಟಿಡಿ 113 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು